# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 572 (632) |
| ಸದಸ್ಯರ ಹೆಸರು | : | ಶ್ರೀ ಮುನಿರಾಜುಗೌಡ ಪಿ.ಎಂ |
| ಉತ್ತರಿಸಬೇಕಾದ ದಿನಾಂಕ | : | 11.12.2023 |
| ಉತ್ತರಿಸಬೇಕಾದ ಸಚಿವರು | : | ಅರಣ್ಯ ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಪ್ರತಿನಿತ್ಯ ಬಳಕೆಯಾಗುವ ಏಕ ಬಳಕೆ ಪ್ಲಾಸ್ಟಿಕ್ ಪ್ರಮಾಣ ಎಷ್ಟು ಸದರಿ ಪ್ಲಾಸ್ಟಿಕ್ನ್ನು ಮರು ಬಳಕೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು: | ಪೌರಾಡಳಿತ ನಿರ್ದೇಶನಾಲಯವು ನೀಡಿರುವ ಮಾಹಿತಿಯಂತೆ ರಾಜ್ಯದಲ್ಲಿ ಪ್ರತಿನಿತ್ಯ ಬಳಕೆಯಾಗುವ ಏಕ ಬಳಕೆ ಪ್ಲಾಸ್ಟಿಕ್ ಪ್ರಮಾಣವು 830.26 TPDರಷ್ಟು ಇದ್ದು, ಪೌರಾಡಳಿತ ನಿರ್ದೇಶನಾಲಯದಿಂದ ಏಕ ಬಳಕೆ ಪ್ಲಾಸ್ಟಿಕ್‌ನ್ನು ಮರುಬಳಕೆ ಮಾಡಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ.<br><br>1. ರಾಜ್ಯದಲ್ಲಿ ಏಕ ಬಳಕೆ ಪ್ಲಾಸ್ಟಿಕ್ ಬಳಕೆಯನ್ನು ಸಂಪೂರ್ಣವಾಗಿ ನಿಷೇಧಿಸಿಲು ರಾಜ್ಯ ಮಟ್ಟದಲ್ಲಿ Special Task Force ಸಮಿತಿಯನ್ನು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ನೇತೃತ್ವದಲ್ಲಿ ರಚಿಸಲಾಗಿರುತ್ತದೆ.<br>2. ನಗರ ಸ್ಥಳೀಯ ಸಂಸ್ಥೆಗಳ ಮಟ್ಟದಲ್ಲಿ ಏಕ ಬಳಕೆ ಪ್ಲಾಸ್ಟಿಕ್ ಪರಿಣಾಮಕಾರಿಯಾಗಿ ಅನುಷ್ಠಾಗೊಳಿಸಲು ಜಿಲ್ಲಾಮಟ್ಟದಲ್ಲಿ ಈಗಾಗಲೇ ರಚಿಸಲಾಗಿರುವ District Level Special Task Force ಸಮಿತಿಗೆ Elimination of Single Use Plastic/ ಏಕ ಬಳಕೆ ಪ್ಲಾಸ್ಟಿಕ್ ನಿಷೇಧದ ವಿಷಯನ್ನು ಸೇರ್ಪಡೆಗೊಳಿಸುವಂತೆ ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಿಗೆ ಸೂಚಿಸಲಾಗಿರುತ್ತದೆ.<br>3. ಪರಿಸರ, ಅರಣ್ಯ ಮತ್ತು ಹವಮಾನ ಬದಲಾವಣೆ ಮಂತ್ರಾಲಯವು ನಿಷೇಧಿತ ಏಕ ಬಳಕೆ ಪ್ಲಾಸ್ಟಿಕ್ ಉತ್ಪನ್ನಗಳನ್ನು 1ನೇ ಜುಲೈ 2022 ರಿಂದ ಜಾರಿಗೆ ಬರುವಂತೆ ದಿನಾಂಕ 12ನೇ ಜೂನ್ 2021 ರಂದು ಅಧಿಸೂಚನೆ (GSR.No.571(E)) ಯನ್ನು ಹೊರಡಿಸಿದ್ದು, ಅದರಂತೆ ನಿಯಮಾನುಸಾರ ಅಗತ್ಯ ಕ್ರಮ ವಹಿಸುವಂತೆ ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಿಗೆ ಸೂಚಿಸಲಾಗಿರುತ್ತದೆ.<br><br>4. ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣೆ ನಿಯಮಗಳು-2016 ಹಾಗೂ ಪರಿಸರ ಸಂರಕ್ಷಣಾ ಕಾಯ್ದೆ 1986 ಸಕ್ಷನ್ 5 ರ ಅಡಿಯಲ್ಲಿ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ನಿರ್ದೇಶನದ ರೀತ್ಯಾ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಗಳಲ್ಲಿ ಪ್ಲಾಸ್ಟಿಕ್ ತ್ಯಾಜ್ಯವನ್ನು ರಸ್ತೆ ನಿರ್ಮಾಣದ ಕಾಮಗಾರಿಯಲ್ಲಿ Indian Road Congress (IRC)ರ ಮಾರ್ಗಸೂಚಿಯ ರೀತ್ಯಾ ಅಗತ್ಯ ಕ್ರಮ ವಹಿಸಲು ಸೂಚಿಸಲಾಗಿರುತ್ತದೆ.<br>5. ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿರವರು ರಚಿಸಿ ನೀಡಲಾದ ಏಕ ಬಳಕೆ ಪ್ಲಾಸ್ಟಿಕ್ ಡ್ಯಾಶ್ ಬೋರ್ಡ್ SUP Portal Login Credentials (user ID & password) ಗಳನ್ನು ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಿಗೆ ನೀಡಲಾಗಿರುತ್ತದೆ. |

| | | |
|---|---|---|
| | | 6. ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿರವರು ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣೆಗೆ ಸಂಬಂಧಿಸಿದಂತೆ Extended Producers Responsibility (EPR) Portal, Single Use Plastic (SUP) Compliance Monitoring Portal and SUP Public Grievance Portal ಗಳ ನಿರ್ವಹಣೆಗೆ ರಾಜ್ಯ ಮಟ್ಟದಲ್ಲಿ ನೋಡಲ್ ಅಧಿಕಾರಿಯನ್ನು ನೇಮಿಸಲಾಗಿರುತ್ತದೆ.<br>7. ರಾಜ್ಯದ ಎಲ್ಲಾ ಮಹಾನಗರಪಾಲಿಕೆಗಳು ಮತ್ತು ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಗಳಲ್ಲಿ ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣೆ ನಿಯಮಗಳು 2016ರ 4ನೇ ತಿದ್ದುಪಡಿ ನಿಯಮಗಳಂತೆ Extended Producer Responsibility (EPR) ಅನುಷ್ಠಾನಗೊಳಿಸಲು ಸುತ್ತೋಲೆಯನ್ನು ಹೊರಡಿಸಲಾಗಿರುತ್ತದೆ.<br>8. ಸರ್ಕಾರದ ವತಿಯಿಂದ ಆಯೋಜಿಸುವ ಅಧಿಕೃತ ಸಭೆ-ಸಮಾರಂಭಗಳಲ್ಲಿ ಮತ್ತು ಸರ್ಕಾರಿ ಕಛೇರಿಗಳಲ್ಲಿ ಏಕ ಬಳಕೆ ಪ್ಲಾಸ್ಟಿಕ್ (Single Use Plastic) ನೀರಿನ ಬಾಟಲ್‌ಗಳ ಬಳಕೆ / ಸರಬರಾಜನ್ನು ನಿಷೇಧಿಸಲು ಅಗತ್ಯ ಕ್ರಮ ವಹಿಸುವಂತೆ ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಿಗೆ ಸೂಚಿಸಲಾಗಿರುತ್ತದೆ.<br>9. ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣೆಯ ನಿಯಮಗಳು Single Use Plastic (SUP) Portal, SUP Field Application App and Extended Producer Responsibility(EPR) Portal ಬಳಕೆಯ ಬಗ್ಗೆ ರಾಜ್ಯ ಮಟ್ಟದ ಒಂದು ದಿನದ ಕಾರ್ಯಾಗಾರವನ್ನು ದಿನಾಂಕ:27-07-2023 ರಂದು ಆಯೋಜಿಸಲಾಗಿ, ಎಲ್ಲಾ ಅಗತ್ಯ ನಿರ್ದೇಶನಗಳು, ಸೂಚನೆ / ಸಲಹೆಗಳನ್ನು ನೀಡಲಾಗಿರುತ್ತದೆ.<br>10. ಏಕ ಬಳಕೆ ನಿಷೇಧ ಕಾಯ್ದೆಯನ್ನು ರಾಜ್ಯದಲ್ಲಿ ಯಶಸ್ವಿಯಾಗಿ ಅನುಷ್ಠಾನಗೊಳಿಸಲು ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಗಳಲ್ಲಿ ಪ್ರಮುಖ ಪ್ರದೇಶಗಳಾದ ತರಕಾರಿ ಮಾರುಕಟ್ಟೆಗಳು, ಸ್ಥಳೀಯ ಸಗಟು ಮಾರುಕಟ್ಟೆಗಳು, ಕೈಗಾರಿಕಾ ಪ್ರದೇಶಗಳು, ಬೀದಿ ವ್ಯಾಪಾರಿಗಳು, ಹೂ ಮಾರಾಟಗಾರರು, ಅಂತರ ರಾಜ್ಯ ಗಡಿಗಳು, ರೈಲು ನಿಲ್ದಾಣ, ವಿಮಾನ ನಿಲ್ದಾಣಗಳಲ್ಲಿ ತಪಾಸಣೆ ಕೈಗೊಳ್ಳಲು ಸೂಚಿಸಲಾಗಿರುತ್ತದೆ.<br>11. ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಗಳಲ್ಲಿ ಪ್ರತಿದಿನ ಉತ್ಪಾದನೆಯಾಗುವ ಪ್ಲಾಸ್ಟಿಕ್ ತ್ಯಾಜ್ಯವನ್ನು ಸಂಗ್ರಹಿಸಿ, ಪ್ರತ್ಯೇಕವಾಗಿ ವಿಂಗಡಿಸಿ RDF ವಸ್ತುಗಳನ್ನು ಹತ್ತಿರದ ಸಿಮೆಂಟ್ ಕಾರ್ಖಾನೆಗೆ ರವಾನಿಸಲು ಅಗತ್ಯ ನಿರ್ದೇಶನಗಳನ್ನು ನೀಡಲಾಗಿರುತ್ತದೆ. |
| ಆ) | ಮೈಸೂರು ಮಹಾನಗರ ಪಾಲಿಕೆ ಏಕ ಬಳಕೆ ಪ್ಲಾಸ್ಟಿಕ್ ಬಳಕೆ ಮಾಡಿ ಫುಟ್ಪಾತ್ ಗೆ ಹಾಕುವ ಟೈಲ್ಸಗಣನ್ನಾಗಿ ಪರಿವರ್ತನೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಇದರಿಂದ ಪ್ರತಿನಿತ್ಯ ಎಷ್ಟು ಪ್ರಮಾಣದ ಪ್ಲಾಸ್ಟಿಕ್ ಮರುಬಳಕೆಯಾಗುತ್ತಿದೆ; | ಮೈಸೂರು ನಗರ ಪಾಲಿಕೆಯಲ್ಲಿ ಪ್ರತಿ ದಿನ ಸಂಗ್ರಹಿಸಲಾಗುವ ತ್ಯಾಜ್ಯದಲ್ಲಿ ಸರಿ ಸುಮಾರು 40-50 ಟನ್ ಪ್ಲಾಸ್ಟಿಕ್ ತ್ಯಾಜ್ಯ ಸಂಗ್ರಹವಾಗುತ್ತಿದ್ದು, ದಿನಾಂಕ:11.12.2019ರಂದು ಐದು ವರ್ಷದ ಅವಧಿಗೆ ಮೆ\|\| ಜಾಗೃತ್ ಟೆಕ್ ಪ್ರೈವೆಟ್ ಲಿಮಿಟೆಡ್ ರವರು ಮೈಸೂರು ನಗರ ಪಾಲಿಕೆಯೊಂದಿಗೆ ಒಡಂಬಡಿಕೆ ಮಾಡಿಕೊಂಡಿರುತ್ತಾರೆ. ಸದರಿ ಕಂಪನಿಗೆ ಮೈಸೂರು ಮಹಾನಗರ ಪಾಲಿಕೆಯ ವತಿಯಿಂದ ಪ್ರತಿ ದಿನ ಸಂಗ್ರಹವಾಗುವ Post Consumer ಪ್ಲಾಸ್ಟಿಕ್ ತ್ಯಾಜ್ಯ ಅಂದರೆ ಚಾಕಲೇಟ್ ಕವರ್, ಬಿಸ್ಕೆಟ್ ಕವರ್, ಚಿಪ್ಸ್ ಕವರ್‌ನಂತಹ Multi-Layered low value ಪ್ಲಾಸ್ಟಿಕ್ ತ್ಯಾಜ್ಯಗಳನ್ನು ಇಂಟರ್‌ಲಾಕ್ ಪೇವರ್ ಬ್ಲಾಕ್ ತಯಾರಿಸಲು ಪ್ರತಿದಿನ 1.5-2 ಮೆಟ್ರಿಕ್ ಟನ್ ಪ್ಲಾಸ್ಟಿಕ್ ತ್ಯಾಜ್ಯಗಳನ್ನು ಸರಬರಾಜು |

| | | |
|---|---|---|
| | | ಮಾಡಲಾಗುತ್ತದೆ. ಸದರಿ ಯೋಜನೆಯನ್ನು ಪ್ರೋತ್ಸಾಹಿಸಲು ಮೈಸೂರು ಮಹಾನಗರ ಪಾಲಿಕೆಯ ವಿದ್ಯಾರಣ್ಯಪುರಂ ತ್ಯಾಜ್ಯ ಸಂಸ್ಕರಣಾ ಘಟಕದಲ್ಲಿ 100*100ಚ.ಅಡಿ ಜಾಗವನ್ನು ನೀಡಲಾಗಿದ್ದು, ಮೆ\|\| ಜಾಗೃತ್ ಟೆಕ್ ಪ್ರೈವೆಟ್ ಲಿಮಿಟೆಡ್ ರವರಿಗೆ ಮಾರ್ಚ್-23 ರಿಂದ ದಿನಾಂಕ:05-11-2023 ರವರೆಗೆ 390 ಮೆಟ್ರಿಕ್ ಟನ್ ಪ್ಲಾಸ್ಟಿಕ್ ತ್ಯಾಜ್ಯವನ್ನು ಪಾಲಿಕೆಯ ವತಿಯಿಂದ ಸರಬರಾಜು ಮಾಡಲಾಗಿರುತ್ತದೆ. ಅದರಲ್ಲಿ ಈಗಾಗಲೇ 100 ಮೆಟ್ರಿಕ್ ಟನ್ ಪ್ಲಾಸ್ಟಿಕ್ ತ್ಯಾಜ್ಯವನ್ನು ಉಪಯೋಗಿಸಿಕೊಂಡು ಪೇವರ್ ಬ್ಲಾಕ್ ತಯಾರಿಸಿ ಮಾರಾಟ ಮಾಡಿರುತ್ತಾರೆ. |
| ಇ) | ರಾಜ್ಯದ ಇತರೆ ಮಹಾ ನಗರ ಪಾಲಿಕೆಗಳಲ್ಲಿಯೂ ಸಹ ಈ ರೀತಿ ಸಿಂಗಲ್ ಯೂಸ್ ಪ್ಲಾಸ್ಟಿಕ್ ಅನ್ನು ಮರು ಬಳಕೆ ಮಾಡುವ ಪ್ರಸ್ತಾವ ಸರ್ಕಾರದ ಮುಂದಿದೆಯೇ; ಇದ್ದಲ್ಲಿ ಯಾವ ಕಾಲ ಮಿತಿಯಲ್ಲಿ ಜಾರಿಗೆ ತರಲಾಗುವುದು? | ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ಮಾನ್ಯತೆ ಹೊಂದಿರುವ Plastic Waste Processor (PWP) ಗಳೊಂದಿಗೆ ಒಡಂಬಡಿಕೆ ಮಾಡಿಕೊಂಡು ಪ್ರತಿದಿನ ಸಂಗ್ರಹಣೆ ಮಾಡಲಾಗುವ ಪ್ಲಾಸ್ಟಿಕ್ ತ್ಯಾಜ್ಯವನ್ನು ವೈಜ್ಞಾನಿಕವಾಗಿ ಮರು ಬಳಕೆ ಅಥವಾ ವಿಲೇವಾರಿ ಮಾಡಲು ಮಹಾ ನಗರ ಪಾಲಿಕೆಗಳು ಮತ್ತು ನಗರ ಸ್ಥಳೀಯ ಸಂಸ್ಥೆಗಳಿಗೆ ಈಗಾಗಲೇ ಪೌರಾಡಳಿತ ನಿರ್ದೇಶನಾಲಯದ ವತಿಯಿಂದ ನಿರ್ದೇಶನಗಳನ್ನು ನೀಡಲಾಗಿದ್ದು, ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆಯ ಮಂತ್ರಾಲಯದಿಂದ, ಕಾಲ ಕಾಲಕ್ಕೆ ಸ್ವೀಕೃತಗೊಳ್ಳುವ ಮಾರ್ಗಸೂಚಿಗಳಂತೆ ಪ್ಲಾಸ್ಟಿಕ್ ತ್ಯಾಜ್ಯವನ್ನು ವೈಜ್ಞಾನಿಕವಾಗಿ ಮರು ಬಳಕೆ (Recycle or Reuse) ಅಥವಾ ವಿಲೇವಾರಿ (End of life: Co-processing in cement factory or Incineration at Waste to Energy Plant) ಮಾಡಲು ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಮಹಾನಗರ ಪಾಲಿಕೆಗಳು ಮತ್ತು ನಗರ ಸ್ಥಳೀಯ ಸಂಸ್ಥೆಗಳಿಗೆ ಸೂಚಿಸಲಾಗಿರುತ್ತದೆ.<br><br>ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣೆ ನಿಯಮಗಳು-2016 ಹಾಗೂ ಪರಿಸರ ಸಂರಕ್ಷಣ ಕಾಯ್ದೆ 1986 ಸೆಕ್ಷನ್ 5 ರ ಅಡಿಯಲ್ಲಿ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ನಿರ್ದೇಶನದ ರೀತ್ಯಾ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಗಳಲ್ಲಿ ಪ್ಲಾಸ್ಟಿಕ್ ತ್ಯಾಜ್ಯವನ್ನು ರಸ್ತೆ ನಿರ್ಮಾಣದ ಕಾಮಗಾರಿಯಲ್ಲಿ Indian Road Congress (IRS)ನ ಮಾರ್ಗಸೂಚಿಯ ರೀತ್ಯಾ ಅಗತ್ಯ ಕ್ರಮ ವಹಿಸಲು ಸೂಚಿಸಲಾಗಿರುತ್ತದೆ. ಸ್ವಚ್ಛ ಭಾರತ್ ಮಿಷನ್ ಅಡಿಯಲ್ಲಿ ರಾಜ್ಯದಲ್ಲಿ ಒಟ್ಟು 299 ಸಂಖ್ಯೆಯ Material Recovery Facility ಅನ್ನು ಸ್ಥಾಪಿಸಲು ಉದ್ದೇಶಿಸಿದ್ದು, ಇದರಲ್ಲಿ ಪ್ಲಾಸ್ಟಿಕ್ ತ್ಯಾಜ್ಯವನ್ನು ವಿವಿಧ ವರ್ಗಗಳಾಗಿ (ಅಂದರೆ Category –I: Rigid Plastic; Category – II: Flexible Plastic; Category – III: Multilayered Plastic) ವಿಂಗಡಿಸಲು ಸಹಕಾರವಾಗುತ್ತದೆ ಹಾಗೂ ಮರು ಬಳಕೆದಾರರಿಗೆ ಅಗತ್ಯವಾದ ರೀತಿಯಲ್ಲಿ ಪ್ಲಾಸ್ಟಿಕ್ ಅನ್ನು ನೀಡಲು ಸಹಕಾರವಾಗುತ್ತದೆ. |

ಸಂಖ್ಯೆ:FEE 181 ENG 2023

(ಈಶ್ವರ್ ಬಿ. ಖಂಡ್ರೆ)
ಅರಣ್ಯ ಜೀವಿಪರಿಸ್ಥಿತಿ ಮತ್ತು ಪರಿಸರ ಸಚಿವರು